ಉಪ ಬಂದೀಖಾನೆ ಕಟ್ಟಡ ನಿರ್ಮಿಸುವುದು

1045 (1270) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ) : ಮಾನ್ಯ ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅರಸೀಕೆರೆಯಲ್ಲಿ ವಾಸಮಾಡಲು ಯೋಗ್ಯವಿಲ್ಲದ ಉಪಬಂದೀಖಾನೆ ಕಟ್ಟಡವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಹೊಸ ಕಟ್ಟಡ ನಿರ್ಮಿಸಲು ತೆಗೆದುಕೊಂಡಿರುವ ಕ್ರಮಗಳಾವುವು?

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂಧೀಖಾನೆ ಸಚಿವರು) :

ಅ) ಬಂದಿದೆ.

ಆ) ನೂತನ ತಾಲ್ಲೂಕು ಉಪಕಾರಾ ಗೃಹ ಕಟ್ಟಡ ನಿರ್ಮಿಸಲು ಕಂದಾಯ ಇಲಾಖಾ ಅಧಿಕಾರಿಗಳಾದ ತಹಶೀಲ್ದಾರರೊಂದಿಗೆ ಚರ್ಚಿಸಿ ಅಗತ್ಯ ಜಮೀನು ಮಂಜೂರಾತಿಗಾಗಿ ಪತ್ರ ವ್ಯವಹಾರ ಮಾಡಿ ವರದಿ ನೀಡಲು ಅರಸೀಕೆರೆ ತಾಲ್ಲೂಕು ಉಪಕಾರಾಗೃಹದ ಅಧೀಕ್ಷಕರಿಗೆ ಸೂಚಿಸಿದ್ದು, ಜಮೀನು ಮಂಜೂರಾದ ನಂತರ ನೂತನ ಉಪಕಾರಾಗೃಹ ಕಟ್ಟಡ ಕಟ್ಟುವ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು.

ಸದಸ್ಯ ಕಾರ್ಯದರ್ಶಿ ನೇಮಕಾತಿ

1047 (1272) ಶ್ರೀ ಶ್ರೀನಿವಾಸ ಎಂ. (ಮಂಡ್ಯ) : ಮಾನ್ಯ ಬಂದರು, ಒಳನಾಡು ಜಲಸಾರಿಗೆ ಹಾಗೂ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕರ್ನಾಟಕ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿಯ ಸದಸ್ಯ ಕಾರ್ಯದರ್ಶಿ ಹುದ್ದೆಗೆ ಐ.ಎಫ್.ಎಸ್. ಅಧಿಕಾರಿಗಳನ್ನೇ ಕಡ್ಡಾಯವಾಗಿ ನೇಮಿಸಬೇಕೆಂಬ ನಿಯಮಗಳೇನಾದರು ಇವೆಯೇ;

ಆ) ಹಾಗಿಲ್ಲದಿದ್ದಲ್ಲಿ, ಸದಸ್ಯ ಕಾರ್ಯದರ್ಶಿ ನೇಮಕಾತಿ ಮಾಡುವಾಗ ಯಾವ ಮಾನದಂಡಗಳನ್ನು ಅನುಸರಿಸಬೇಕಾಗುತ್ತದೆ;

ಇ) ಹಾಗಿದ್ದಲ್ಲಿ, ಈ ಮಾನದಂಡಗಳನ್ನು ಹಾಲಿ ಸದಸ್ಯ ಕಾರ್ಯದರ್ಶಿಯವರನ್ನು ನೇಮಕಾತಿ ಮಾಡುವಾಗ ಅನುಸರಿಸಲಾಗಿದೆಯೇ;

ಈ) ಒಂದು ವೇಳೆ ನಿಯಮ ಬಾಹಿರವಾಗಿ ಸಸ್ಯ ಕಾರ್ಯದರ್ಶಿ ನೇಮಕವಾಗಿದ್ದರೆ, ಕೂಡಲೇ ಅವರನ್ನು ಬದಲಿಸಿ, ಮಾನಡಂದಗಳನ್ನು ಆಧರಿಸಿ ಸರ್ಕಾರ ನೂತನವಾಗಿ ಸದಸ್ಯ ಕಾರ್ಯದರ್ಶಿಗಳನ್ನು ನೇಮಿಸುವುದೇ;

ಉ) ಹಾಲಿ ಸದಸ್ಯ ಕಾರ್ಯದರ್ಶಿಗಳು, ಸರ್ಕಾರದ ನಿರ್ದೇಶನ ಗಳನ್ನು ಪಾಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಊ) ಹಾಗಿದ್ದಲ್ಲಿ, ಅಂತಹವರ ವಿರುದ್ಧ ಇದುವರೆವಿಗೂ ಯಾವ ರೀತಿಯ ಶಿಸ್ತು ಕ್ರಮಗಳನ್ನು ಕೈಗೊಳ್ಳಲಾಗಿದೆ (ವಿವರ ನೀಡುವುದು)?

ಶ್ರೀ ಜೆ. ಕೃಷ್ಣ ಪಾಲೇಮಾರ್ (ಬಂದರು, ಒಳನಾಡು ಜಲಸಾರಿಗೆ ಹಾಗೂ ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು) :

ಅ) ಮಂಡಳಿಯ ಸದಸ್ಯ ಕಾರ್ಯದರ್ಶಿ ಹುದ್ದೆಗೆ ಐ.ಎಫ್.ಎಸ್. ಅಧಿಕಾರಿಗಳನ್ನೇ ನೇಮಿಸಬೇಕೆಂಬ ಯಾವುದೇ ನಿಯಮಗಳಿಲ್ಲ.

ಆ) ಜಲ (ಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣ) ಕಾಯ್ದೆ, 1974ರ ಸೆಕ್ಷನ್ 4 (2) (ಎಫ್) ಅನ್ವಯ ರಾಜ್ಯ ಸರ್ಕಾರವು ವೈಜ್ಞಾನಿಕ, ಇಂಜಿನಿಯರಿಂಗ್ ಅಥವಾ ಮಾಲಿನ್ಯ ನಿಯಂತ್ರಣ ವಿಷಯಗಳ ಉಸ್ತುವಾರಿ ಕುರಿತು ಅರ್ಹತೆ, ಜ್ಞಾನ ಮತ್ತು ಅನುಭವ ಇರುವವರನ್ನು ಪೂರ್ಣಕಾಲಿಕ ಸದಸ್ಯ ಕಾರ್ಯದರ್ಶಿಯಾಗಿ ನೇಮಿಸಬೇಕಿದೆ.

ಇ) ಮೇಲಿನ ಮಾನದಂಡವನ್ನು ಅನುಸರಿಸಿಯೇ ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 116 ಎಸ್ಎಫ್ಪಿ 2008 ದಿನಾಂಕ: 15.07.2008ರ ರೀತ್ಯ ಹಾಲಿ ಕಾರ್ಯ ನಿರ್ವಹಿಸುತ್ತಿರುವ ಶ್ರೀ ಎಂ.ಎಸ್. ಗೌಡರ್, ಐ.ಎಫ್.ಎಸ್. ರವರನ್ನು ಸದಸ್ಯ ಕಾರ್ಯದರ್ಶಿಗಳಾಗಿ ನೇಮಕಾತಿ ಮಾಡಲಾಗಿದೆ.

ಈ) ಹಾಲಿ ಸದಸ್ಯ ಕಾರ್ಯದರ್ಶಿಯನ್ನು ನೇಮಿಸುವಾಗ ಮೇಲಿನ ಮಾನದಂಡಗಳನ್ನು ಅನುಸರಿಸಿಯೇ ನೇಮಕ ಮಾಡಲಾಗಿದೆ. ಆದುದರಿಂದ, ಅವರನ್ನು ಬದಲಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. ಆದಾಗ್ಯೂ ಸಾರ್ವಜನಿಕ ಹಿತದೃಷ್ಟಿಯಿಂದ ಅವಶ್ಯವೆನಿಸಿದಾಗ ಅಧಿಕಾರಿಯನ್ನು ಬದಲಾಯಿಸುವ ಪೂರ್ಣಾಧಿಕಾರ ಸರ್ಕಾರಕ್ಕಿರುತ್ತದೆ.

ಉ) ಜಲಮಾಲಿನ್ಯ ನಿವಾರಣೆ ಮತ್ತು ನಿಯಂತ್ರಣಕ್ಕಾಗಿ ಕರ್ನಾಟಕ ರಾಜ್ಯ ಮಂಡಳಿ ನಿಯಮ, 1976ರ ಅಧ್ಯಾಯ–II ಸೆಕ್ಷನ್ 15ರ ಪ್ರಕಾರ

ಮಂಡಳಿಯ ಅಧ್ಯಕ್ಷರು ಆಡಳಿತಾತ್ಮಕ ಮುಖ್ಯಸ್ಥರಾಗಿರುತ್ತಾರೆ. ಸದಸ್ಯ ಕಾರ್ಯದರ್ಶಿಗಳು ಅವರ ಅಧೀನದಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳಾಗಿರುತ್ತಾರೆ. ಸರ್ಕಾರದ ಯಾವುದೇ ನಿರ್ದೇಶನ ಅಥವಾ ಆದೇಶಗಳನ್ನು ಸದಸ್ಯ ಕಾರ್ಯದರ್ಶಿಗಳು ಉಲ್ಲಂಘಿಸಿರುವುದಿಲ್ಲ.

ಊ) ಸದಸ್ಯ ಕಾರ್ಯದರ್ಶಿಗಳು ಸರ್ಕಾರದ ಯಾವುದೇ ನಿರ್ದೇಶನ ಅಥವಾ ಆದೇಶಗಳನ್ನು ಉಲ್ಲಂಘಿಸಿರುವುದಿಲ್ಲವಾದ್ದರಿಂದ ಶಿಸ್ತುಕ್ರಮ ಜರುಗಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಪ್ರವಾಸಿ ಮಂದಿರದ ಮೇಲಂತಸ್ತು ಕಟ್ಟಡ ನಿರ್ಮಿಸುವುದು

1048 (1387) ಶ್ರೀ ಶ್ರೀನಿವಾಸ್ (ವಾಸು) ಎಸ್.ಆರ್. (ಗುಬ್ಬಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಬ್ಬಿ ತಾಲ್ಲೂಕು ಕೇಂದ್ರದಲ್ಲಿ ಪ್ರವಾಸಿ ಮಂದಿರದಲ್ಲಿ ಮೇಲಂತಸ್ತು ಕಟ್ಟಡ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಈ ಸಾಲಿನಲ್ಲಿ ಪ್ರವಾಸಿ ಮಂದಿರದ ಮೇಲಂತಸ್ತು ಕಟ್ಟಡ ನಿರ್ಮಾಣ ಕಾಮಗಾರಿಗೆ ಮಂಜೂರಾತಿ ನೀಡಿ ಚಾಲನೆ ನೀಡಲಾಗುವುದೇ?

ಇ) ಪ್ರವಾಸಿ ಮಂದಿರದ ಮೇಲಂತಸ್ತಿನ ಕಟ್ಟಡಕ್ಕೆ ಸರ್ಕಾರ ಕೂಡಲೇ ಅನುದಾನವನ್ನು ಬಿಡುಗಡೆ ಮಾಡುವುದೇ;

ಈ) ಹಾಗಿದ್ದಲ್ಲಿ, ಎಷ್ಟು ಪ್ರಮಾಣದಲ್ಲಿ ಮತ್ತು ಯಾವಾಗ ಬಿಡುಗಡೆ ಮಾಡಲಾಗುವುದು?

ಶ್ರೀ ಸಿ.ಎಂ. ಉದಾಸಿ (ಲೋಕೋಪಯೋಗಿ ಸಚಿವರು) :

ಅ) ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.